ಕೆಲಸ ಮಾಡುತ್ತಿವೆ. ಬೇಸಿಗೆಯಲ್ಲಿ ಅಂತರ್ಜಲ ಮಟ್ಟ ಕಡಿಮೆಯಾಗುವುದರಿಂದ ಸ್ವಲ್ಪಮಟ್ಟಿಗೆ ಕುಡಿಯುವ ನೀರಿಗೆ ತೊಂದರೆಯಾಗುತ್ತದೆ.

ಆ) ದುಂಡನಾಯ್ಕನಹಳ್ಳಿ ಹರಿಜನ ಕಾಲೋನಿಗೆ ಗ್ರಾಮದಲ್ಲಿರುವ ಕಿರುನೀರು ಸರಬರಾಜು ಯೋಜನೆಯನ್ನು ವಿಸ್ತರಿಸಲು ಉದ್ದೇಶಿಸಿದೆ. ಕಲ್ಲಹಳ್ಳಿ ಹರಿಜನ ಕಾಲೋನಿಗೆ ಕೊಳವೆನೀರು ಸರಬರಾಜು ವ್ಯವಸ್ಥೆ ಕಲ್ಪಿಸಲಾಗುತ್ತಿದೆ.

ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ

980 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎಷ್ಟು ಸಾವಿರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಪ್ರಸಕ್ತ ಸಾಲಿನಲ್ಲಿ ನೇಮಕ ಮಾಡಿಕೊಳ್ಳಲಾಗುವುದು?

ಆ) ಈ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವಾಗ ಯಾವ ಮಾನದಂಡವನ್ನು ಅನುಸರಿಸಲಾಗುವುದು?

ಇ) ಈ ನೇಮಕಾತಿಯಲ್ಲಿ ವಯೋಮಿತಿ ಮೀರುತ್ತಿರುವ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದೆಯೇ? ಇಲ್ಲದಿದ್ದರೆ, ಕಾರಣವೇನು? (ವಿವರ ನೀಡುವುದು).

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಮತ್ತು ಆ) ಸದ್ಯಕ್ಕೆ ಸುಮಾರು 7300 ಶಿಕ್ಷಕರ ಹುದ್ದೆಗಳು ಖಾಲಿ ಇದೆ. ಶಿಕ್ಷಕರ ಅಗತ್ಯತೆ ಆಧರಿಸಿ ಪ್ರಸ್ತುತ ಜಾರಿಯಲ್ಲಿರುವ ನೇಮಕಾತಿ ನಿಯಮಗಳನ್ವಯ ಶಿಕ್ಷಕರ ಹುದ್ದೆಗಳನ್ನು ತುಂಬಲಾಗುವುದು.

ಇ) ಇಲ್ಲ.

ಪ್ರೌಢಶಾಲಾ ಶಿಕ್ಷಕರ ನೇಮಕಾತಿ

981 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ಬಿ.ಇಡಿ ಮತ್ತು ಬಿ.ಪಿ.ಇಡಿ ಪ್ರೌಢಶಾಲಾ ಶಿಕ್ಷಕರನ್ನು ನೇಮಿಸಿಕೊಳ್ಳಲು ಸರ್ಕಾರ ಯೋಚಿಸಿದೆಯೇ?

ಆ) ಯೋಚಿಸಿದ್ದರೆ, ಎಷ್ಟು ಶಿಕ್ಷಕರನ್ನು ನೇಮಿಸಿಕೊಳ್ಳಲಾಗುವುದು?

ಇ) ವಯೋಮಿತಿ ಮೀರುತ್ತಿರುವ ನಿರುದ್ಯೋಗಿ ಬಿ.ಇಡಿ ಮತ್ತು ಬಿ.ಪಿಇಡಿ ತರಬೇತಿ ಹೊಂದಿದ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುತ್ತಿದೆಯೇ?

ಈ) ವಿವರ ನೀಡುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಮತ್ತು ಆ) ಒಟ್ಟು 2298 ಖಾಲಿ ಹುದ್ದೆಗಳಿದ್ದು, ಇದರಲ್ಲಿ ಶೇಕಡ 50ರಷ್ಟು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ ನೀಡುವ ಮೂಲಕ ತುಂಬಬೇಕಾಗಿದ್ದು, ಉಳಿದ ಶೇಕಡ 50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬಬೇಕಾಗಿದೆ. ಸೂಕ್ತ ಕಾಲದಲ್ಲಿ ತಕ್ಕ ಕ್ರಮವನ್ನು ಕೈಗೊಳ್ಳಲಾಗುವುದು.

ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಕಲ್ಬುರ್ಗಿ ವಿಶ್ವವಿದ್ಯಾಲಯದಲ್ಲಿ ನಿಯಮಾವಳಿಗಳನ್ನು ಉಲ್ಲಂಘಿಸಿ ಅಕ್ರಮ ಬಡ್ತಿ ನೀಡಿರುವುದು

982 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಲ್ಬುರ್ಗಿ ವಿಶ್ವವಿದ್ಯಾನಿಲಯದಲ್ಲಿ ನಿಯಮಾವಳಿಗಳನ್ನು ಉಲ್ಲಂಘಿಸಿ ಅಕ್ರಮ ಬಡ್ತಿಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ?

ಇ) ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಮತ್ತು ಇ) ಅನೇಕ ಪ್ರಕರಣಗಳಲ್ಲಿ ಮೆರಿಟ್ ಪ್ರಮೋಶನ್ ಸ್ಕೀಮನ್ನು ನಿರ್ಬಂಧಿಸುವ ಅನುಶಾಸನವನ್ನು ತಪ್ಪಾಗಿ ವ್ಯಾಖ್ಯಾನಿಸಿ ಅನಿಯತವಾದ ಬಡ್ತಿಗಳನ್ನು ನೀಡಲಾಗಿದೆ. ಸರ್ಕಾರಿ ಲೆಕ್ಕ ಪರಿಶೋಧಕರು ಅವುಗಳನ್ನು ಸರ್ಕಾರದ ಗಮನಕ್ಕೆ ತಂದಿದ್ದಾರೆ. ಗುಲ್ಬರ್ಗಾ ವಿಶ್ವವಿದ್ಯಾಲಯ ಸ್ಥಾಪಿಸಿದ್ದ ಸಮಿತಿಯು ಅಂತಹ ಎಲ್ಲಾ ಬಡ್ತಿಗಳನ್ನು ಪರಮರ್ಶಿಸಿ ತನ್ನ ವರದಿಯನ್ನು ನಿರ್ದಿಷ್ಟ ಶಿಫಾರಸ್ಸಿನೊಂದಿಗೆ ಸಲ್ಲಿಸಿತ್ತು. ಅದನ್ನು ಸಿಂಡಿಕೇಟ್ ವಿಮರ್ಶಿಸಿ ತನ್ನ ನಿರ್ಣಯವನ್ನು ಸರ್ಕಾರಕ್ಕೆ ಸಲ್ಲಿಸಿದೆ. ಅದು ತೀವ್ರ ಪರಿಶೀಲನೆಯಲ್ಲಿದೆ.